ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ರಾಜ್ಯದಲ್ಲಿನ ಸರ್ಕಾರಿ ನೌಕರರಿಗೆ ನೀಡುತ್ತಿರುವ ವೈದ್ಯಕೀಯ ಸೌಲಭ್ಯಗಳ ಕುರಿತು

ಶ್ರೀಮತಿಎಸ್.ವೀಣಾಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-

1208 (1428) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿನ ಸರ್ಕಾರಿ ನೌಕರರಿಗೆ ಸಿಗುತ್ತಿರುವ ವೈದ್ಯಕೀಯ ಸೌಲಭ್ಯಗಳೇನು ; ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಯೋಜನೆಗಳಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಸರ್ಕಾರಿ ನೌಕರರಿಗೆ ಹಾಗೂ ಅವರ ಅವಲಂಬಿತರಿಗೆ ಸಂಪೂರ್ಣವಾಗಿ ಕ್ಯಾಷ್‌ಲೆಸ್ ವೈದ್ಯಕೀಯ ಸೇವಾ ಸೌಲಭ್ಯ ಕಲ್ಪಿಸಲು ಇರುವ ತೊಂದರೆ ಅಡೆ ತಡೆಗಳು ಏನು ;

(ಇ) ಸರ್ಕಾರಿ ನೌಕರರು ಮರುಪಾವತಿಗಾಗಿ ಅಲೆದಾಟ ತಪ್ಪಿಸುವ ಸಲುವಾಗಿ ಮುಂದಿನ ಆರ್ಥಿಕ ವರ್ಷದಿಂದ ಎಲ್ಲಾ ಸರ್ಕಾರಿ ನೌಕರರು ಹಾಗೂ ಅವರ ಅವಲಂಬಿತರಿಗೆ ಸಂಪೂರ್ಣವಾಗಿ ಕ್ಯಾಷ್‌ಲೆಸ್ ವೈದ್ಯಕೀಯ ಸೇವಾ ಸೌಲಭ್ಯ ಕಲ್ಪಿಸಲು ಸರ್ಕಾರ ಕ್ರಮ ವಹಿಸುವುದೇ ?